15528 ದಿ-330 = 15
1807

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಕೆ. ಪ್ರತಾಪಸಿಂಹ ನಾಯಕ್. ಇವರ ಪ್ರಸ್ತಾಪಿಸಿರುವ ನಿಯಮ-330ಕ್ಕೆ ಉತ್ತರ.**

**ಪ್ರಶ್ನೆ** : - ರಾಜ್ಯದ ವಿವಿಧ ಕಾರಾಗೃಹದಲ್ಲಿರುವ ಹಲವಾರು ವಿಚಾರಣಾಧೀನ ಕೈದಿಗಳು ಹಾಗೂ ಸಜಾ ಬಂದಿಗಳು ಜೈಲು ಒಳಗಿನಿಂದಲೇ ಅವಿರತವಾಗಿ "ಅಕ್ರಮ ಚಟುವಟಿಕೆ" ಗಳನ್ನು ನಿರಂತರವಾಗಿ ನಡೆಸುತ್ತಾ ಬಂದಿದ್ದಾರೆ. ಆರೋಪಿಗಳು ಹಾಗೂ ರೌಡಿಗಳ ಜೊತೆಗೆ ಕೈದಿಗಳು ನಿರಂತರ ಸಂಪರ್ಕದಲ್ಲಿದ್ದುಕೊಂಡು ಅಪರಾಧ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿದ್ದು, ಇದನ್ನು ತಡೆಯುವ ನಿಟ್ಟಿನಲ್ಲಿ ಕಠಿಣ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ.

ಮೊಬೈಲ್ ಫೋನ್‌ಗಳನ್ನು ಅಕ್ರಮವಾಗಿ ಬಳಸಿ ಜೈಲಿನಿಂದಲೇ ಹಣಕ್ಕಾಗಿ ಬೇಡಿಕೆ ಹಾಕುತ್ತಿರುವ ಕೊಲೆ ಬೆದರಿಕೆ ಹಾಗೂ ಡ್ರಗ್ಸ್ ಮಾರಾಟಕ್ಕೆ ಸಂಚು ರೂಪಿಸುವುದರ ಜೊತೆಗೆ ಎಲ್ಲಾ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ಅವ್ಯಾಹತವಾಗಿ ನಡೆಸುತ್ತಿರುವುದನ್ನು ತಡೆಯಲು ಸರ್ಕಾರ ಕಠಿಣ ಕ್ರಮಗಳನ್ನು ತೆಗೆದುಕೊಳ್ಳದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ** :- ರಾಜ್ಯದ ವಿವಿಧ ಕಾರಾಗೃಹದಲ್ಲಿ ಕೆಲವು ಬಂದಿಗಳು ಕಾರಾಗೃಹಗಳಲ್ಲಿ ಅಕ್ರಮ ಚಟುವಟಿಕೆಗಳನ್ನು ನಡೆಸುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಬಂದಿಗಳು ನಿಷೇಧಿತ ವಸ್ತುಗಳ ಬಳಕೆಯನ್ನು ಮಾಡದಂತೆ ಹಾಗೂ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಈಗಾಗಲೇ ಈ ಕೆಳಕಂಡಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಂಡಿರುತ್ತದೆ.

- ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 187 ಪಿಆರ್‌ಎ 2021, ದಿನಾಂಕ: 28.03.2022ರಲ್ಲಿ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳು, ಎಲೆಕ್ಟ್ರಾನಿಕ್ ಸಾಧನಗಳು ಮತ್ತು ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ, ಕರ್ನಾಟಕ ಕಾರಾಗೃಹಗಳ ನಿಯಮಗಳು-1974ರ ನಿಯಮ 42(3)ರಲ್ಲಿನ ನಿಷೇಧಿತ ವಸ್ತುಗಳ ಪಟ್ಟಿಗೆ (ಕರ್ನಾಟಕ ಕಾರಾಗೃಹ (ತಿದ್ದುಪಡಿ) ನಿಯಮಗಳು-2022) ರಂತೆ ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ನಿಷೇಧಿತ ವಸ್ತುಗಳ ಪಟ್ಟಿಗೆ ಸದರಿ ವಸ್ತುಗಳನ್ನು ಸೇರ್ಪಡೆಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ. ಅದರನ್ವಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

- ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 09 ಶಾಸನ 2022, ದಿನಾಂಕ: 05.04.2022ರಲ್ಲಿ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳು, ಎಲೆಕ್ಟ್ರಾನಿಕ್ ಸಾಧನಗಳು ಮತ್ತು ನಿಷೇಧಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ ಕರ್ನಾಟಕ ಬಂದೀಖಾನೆಗಳ ಅಧಿನಿಯಮ, 1963ರ ಕಲಂ 42ಕ್ಕೆ (ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022) ರಲ್ಲಿ, ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ನಿಷೇಧಿತ ವಸ್ತುಗಳ ಬಳಕೆ ಮಾಡಿದಲ್ಲಿ ಮೂರು ವರ್ಷಗಳಿಗೆ ಕಡಿಮೆ ಇಲ್ಲದ ಆದರೆ ಐದು ವರ್ಷಗಳಿಗೆ ವಿಸ್ತರಿಸಬಹುದಾದ ಶಿಕ್ಷೆ ಮತ್ತು ದಂಡನೆಗೆ ಒಳಪಡಿಸಲಾಗುತ್ತಿದೆ. ಅದರನ್ವಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.

..2...

- ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಬಳಕೆಯನ್ನು ಹಾಗೂ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಅನಿರೀಕ್ಷಿತ ತಪಾಸಣೆಗಳನ್ನು ಕೈಗೊಳ್ಳಲಾಗುತ್ತಿರುತ್ತದೆ. ಆಯಾ ಕಾರಾಗೃಹಗಳ ವ್ಯಾಪ್ತಿಯ ಪೊಲೀಸ್ ಆಯುಕ್ತರುಗಳು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳ ಅಧ್ಯಕ್ಷತೆಯಲ್ಲಿ ಕಾರಾಗೃಹಗಳಲ್ಲಿ ಭದ್ರತೆ ಮತ್ತು ಅಪರಾಧಗಳ ನಿಯಂತ್ರಣಕ್ಕಾಗಿ ಸಮಿತಿಗಳನ್ನು ಪುನರ್ ರಚಿಸಲಾಗಿರುತ್ತದೆ.

- ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಬಳಕೆ ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂಬುದರ ಬಗ್ಗೆ ಬಂದಿಗಳಿಗೆ/ ಕಾರಾಗೃಹದ ಅಧಿಕಾರಿ/ಸಿಬ್ಬಂದಿಗಳಿಗೆ/ಸಾರ್ವಜನಿಕರಿಗೆ ಅಗತ್ಯ ಅರಿವು ಮತ್ತು ಜಾಗೃತಿಯನ್ನು ಮೂಡಿಸುವ ಸಂಬಂಧ ಕಾರಾಗೃಹದ ಮುಂಭಾಗ/ಒಳಭಾಗ/ ಸಂದರ್ಶನ ಕೊಠಡಿಯ ಬಳಿ ಕಾರಾಗೃಹದ ಹೊರ ಆವರಣದಲ್ಲಿನ ಸೂಕ್ಷ್ಮ/ ಸೂಕ್ತ ಪ್ರದೇಶಗಳಲ್ಲಿ ಸೂಚನಾ ಫಲಕಗಳನ್ನು ಈಗಾಗಲೇ ಅಳವಡಿಸಲಾಗಿರುತ್ತದೆ.

- ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022 ಕಲಂ 42 ಜಾರಿಯಾದ ದಿನಾಂಕ: 05.04.2022 ರಿಂದ ದಿನಾಂಕ: 06.03.2025 ರವರೆಗೆ ಒಟ್ಟು 248 ಪ್ರಕರಣಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿರುತ್ತದೆ.

- ರಾಜ್ಯದ ಕೇಂದ್ರ ಕಾರಾಗೃಹಗಳಾದ ಬೆಂಗಳೂರು, ಮೈಸೂರು, ಕಲಬುರ್ಗಿ, ಬೆಳಗಾವಿ, ಧಾರವಾಡ, ಬಳ್ಳಾರಿ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ ಅಳವಡಿಸಲಾಗಿರುವ 66 ಸಂಖ್ಯೆ ಮೊಬೈಲ್ ಜಾಮರ್‌ಗಳನ್ನು ದುರಸ್ಥಿ ಮತ್ತು 2ಜಿ ಯಿಂದ 4ಜಿ/5ಜಿಗೆ ಮೇಲ್ದರ್ಜೇಗೇರಿಸಲು ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ ಬೆಂಗಳೂರು ಮತ್ತು ಬೆಳಗಾವಿ ಕೇಂದ್ರ ಕಾರಾಗೃಹಗಳಲ್ಲಿ ಜಾಮರ್‌ಗಳ ದುರಸ್ಥಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಮುಕ್ತಾಯಗೊಂಡಿದ್ದು, Testing and Recalibration ಹಂತದಲ್ಲಿರುತ್ತದೆ. ಕಾರಾಗೃಹದ ಒಳಭಾಗದಲ್ಲಿ ಯಾವುದೇ ನೆಟ್‌ವರ್ಕ್ ದೊರೆಯದಂತೆ ಹಾಗೂ ಕಾರಾಗೃಹದ ಹೊರಭಾಗದಲ್ಲಿ ಸಾರ್ವಜನಿಕರಿಗೆ ನೆಟ್‌ವರ್ಕ್ ತೊಂದರೆಯಾಗದಂತೆ ಅಗತ್ಯ ಕ್ರಮವಹಿಸುವಂತೆ M/s TCIL ಮತ್ತು DOT ರವರಿಗೆ ಸೂಚಿಸಲಾಗಿರುತ್ತದೆ. ಇನ್ನುಳಿದ ಕಾರಾಗೃಹಗಳಲ್ಲಿನ ಜಾಮರ್‌ಗಳ ದುರಸ್ಥಿ ಮತ್ತು ಮೇಲ್ದರ್ಜೆ ಕಾರ್ಯ ಪ್ರಗತಿಯಲ್ಲಿರುತ್ತದೆ.

- ಕೇಂದ್ರ ಸರ್ಕಾರದ "ಕಾರಾಗೃಹ ಆಧುನೀಕರಣ ಯೋಜನೆಯಡಿ" ಭದ್ರತೆ ಮತ್ತು ತಪಾಸಣೆಗಾಗಿ 09 ಸಂಖ್ಯೆ X-ray Baggage Scanner ಮತ್ತು ಸಂವಹನ ಸಲುವಾಗಿ 350 ಸಂಖ್ಯೆ Walkie Talkie ಗಳನ್ನು ಖರೀದಿಸಲು ಕ್ರಮವಹಿಸಲಾಗಿದ್ದು, ಕಾರಾಗೃಹಗಳಿಗೆ ಸರಬರಾಜು ಪ್ರಕ್ರಿಯೆ ಚಾಲನೆಯಲ್ಲಿದೆ.

- ಬೆಂಗಳೂರು ಕೇಂದ್ರ ಕಾರಾಗೃಹದ ಆವರಣದಲ್ಲಿ ಮೊಬೈಲ್ ಸಿಗ್ನಲ್ ದೊರೆಯದಂತೆ 3 ಸಂಖ್ಯೆ Towers of Harmonius Call Blocking System (T-HCBS) Technology ಮೊಬೈಲ್ ಟವರ್‌ಗಳನ್ನು ಅಳವಡಿಸಲಾಗಿರುತ್ತದೆ.

...3....

➢ ರಾಜ್ಯದ ಕಾರಾಗೃಹಗಳಲ್ಲಿ ಮೊಬೈಲ್ ಫೋನ್‌ಗಳು ಮತ್ತು ಇತರೆ ಯಾವುದೇ ರೀತಿಯ ನಿಷೇಧಿತ ವಸ್ತುಗಳ ಕಳ್ಳ ಸಾಗಾಣಿಕೆಯನ್ನು ಹಾಗೂ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಕಾರಾಗೃಹದೊಳಗೆ ಪ್ರವೇಶಿಸುವ ಮತ್ತು ಹೊರಬರುವ ವ್ಯಕ್ತಿಗಳನ್ನು ಹಾಗೂ ವಸ್ತುಗಳನ್ನು ಪರಿಶೀಲಿಸಲು ಅತ್ಯಾಧುನಿಕ ಮಾದರಿಯ ತಪಾಸಣಾ ಉಪಕರಣಗಳಾದ X-ray Baggage Scanner, FG-1 Security Pole, HHMD, DFMD, DSMD ಮತ್ತು Non Linear Junction Detector (NLJD) ಗಳನ್ನು ಒದಗಿಸಲಾಗಿರುತ್ತದೆ.

➢ ಕಾರಾಗೃಹಗಳ ಭದ್ರತೆ ಹಾಗೂ ಆಡಳಿತ ವ್ಯವಸ್ಥೆಯನ್ನು ಬಲಪಡಿಸಿ, ಬಂದಿಗಳ ಚಲನವಲನಗಳ ಮೇಲೆ ಇನ್ನೂ ಹೆಚ್ಚಿನ ನಿಗಾವಹಿಸಲು ಮೊದಲ ಹಂತವಾಗಿ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಆಧುನಿಕ ತಂತ್ರಜ್ಞಾನ ಹೊಂದಿರುವ AI-powered Audio-Video Analytics system ಸಿಸಿಟಿವಿ ಕಣ್ಗಾವಲು ವ್ಯವಸ್ಥೆಯನ್ನು ಅಳವಡಿಸಲಾಗಿರುತ್ತದೆ.

➢ ರಾಜ್ಯದ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಬಳಕೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಅಧಿಕಾರಿ/ಸಿಬ್ಬಂದಿಗಳು ಅವಶ್ಯಕವಾಗಿದ್ದು, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆಯು ಪರಿಶೀಲನಾ ಹಂತದಲ್ಲಿದೆ.

➢ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳು ಪ್ರವೇಶಿಸದಂತೆ ತಡೆಯಲು ನಿಗಧಿಪಡಿಸಿರುವ ನಿಯಂತ್ರಣ ಕ್ರಮಗಳನ್ನು ಕಟ್ಟು ನಿಟ್ಟಾಗಿ ಪಾಲಿಸದೇ ಅಂತಹ ವಸ್ತುಗಳ ಪ್ರವೇಶಕ್ಕೆ ಜವಾಬ್ದಾರರಾದ ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗಿದ್ದು, 2012 ರಿಂದ 2024ರ ಅವಧಿಯಲ್ಲಿನ ಶಿಸ್ತು ಕ್ರಮ ಜರುಗಿಸಲಾದ ವಿವರ ಈ ಕೆಳಕಂಡಂತಿದೆ:

| ವರ್ಷ | ಪ್ರಕರಣಗಳ ಸಂಖ್ಯೆ | ಕರ್ತವ್ಯ ಲೋಪವೆಸಗಿದ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ದೋಷ ಮುಕ್ತಗೊಂಡ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ಶಿಸ್ತು ಕ್ರಮಕ್ಕೆ ಒಳಗಾದ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ವಿಚಾರಣೆ ಎದುರಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ |
|---|---|---|---|---|---|
| 2012 | 02 | 04 | 00 | 04 | - |
| 2013 | 04 | 07 | 02 | 05 | - |
| 2014 | 00 | 00 | 00 | 00 | - |
| 2015 | 00 | 00 | 00 | 00 | - |
| 2016 | 04 | 21 | 00 | 21 | - |
| 2017 | 02 | 02 | 02 | 00 | - |
| 2018 | 01 | 01 | 00 | 01 | - |
| 2019 | 01 | 01 | 00 | 01 | - |
| 2020 | 02 | 02 | 01 | 01 | - |
| 2021 | 06 | 42 | - | 42 | - |
| 2022 | 08 | 78 | - | 16 | 62 |
| 2023 | 04 | 28 | - | 02 | 26 |
| 2024 | 24 | 126 | - | - | 126 |
| **ಒಟ್ಟು** | **58** | **312** | **5** | **93** | **214** |

➢ ಶಿಸ್ತು ಕ್ರಮಕ್ಕೆ ಒಳಗಾದ / ವಿಚಾರಣೆ ಎದುರಿಸುತ್ತಿರುವ 312 ಅಧಿಕಾರಿ/ ಸಿಬ್ಬಂದಿಗಳ ಪೈಕಿ 93 ಅಧಿಕಾರಿ/ ಸಿಬ್ಬಂದಿಗಳಿಗೆ ಈಗಾಗಲೇ ದಂಡನೆ ವಿಧಿಸಲಾಗಿದ್ದು, ಈ ಪೈಕಿ 02 ಸಿಬ್ಬಂದಿಗಳನ್ನು ಸೇವೆಯಿಂದ ಬಿಡುಗಡೆಗೊಳಿಸಲಾಗಿದೆ.

…4….

- കാರാಗೃಹಗಳಲ್ಲಿ ನಿಷೇಧಿತ ವಸ್ತುಗಳ ಪ್ರವೇಶಿಸದಂತೆ ತಡೆಯಲು ಜವಾಬ್ದಾರರಾದ ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ಪ್ರಕರಣ ದಾಖಲಾಗಿದ್ದು ವಿವರ ಈ ಕೆಳಕಂಡಂತಿದೆ

| ವರ್ಷ | ಪ್ರಕರಣಗಳ ಸಂಖ್ಯೆ | ಕರ್ತವ್ಯ ಲೋಪವೆಸಗಿದ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ದೋಷ ಮುಕ್ತಗೊಂಡ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ಶಿಸ್ತು ಕ್ರಮಕ್ಕೆ ಒಳಗಾದ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ | ವಿಚಾರಣೆ ಎದುರಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ಸಂಖ್ಯೆ |
|---|---|---|---|---|---|
| 2023 | 03 | 03 | - | - | 03 |
| 2024 | 05 | 18 | - | - | 18 |
| 2025 | 01 | 01 | - | - | 01 |
| **ಒಟ್ಟು** | **09** | **22** | **-** | **-** | **22** |

**ಸಂಖ್ಯೆ: ಹೆಚ್‌ಡಿ 173 ಪಿಆರ್‌ಎ 2025**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು